**ಕರ್ನಾಟಕ ಸರ್ಕಾರ**

**ವಾಣಿಜ್ಯ ತೆರಿಗೆ ಇಲಾಖೆ**

**2003ರ ಕರ್ನಾಟಕ ಮೌಲ್ಯವರ್ಧಿತ ತೆರಿಗೆ ಅಧಿನಿಯಮದ ಪ್ರಕರಣ 59ರ ಉಪ ಪ್ರಕರಣ (4)ರ ಅಡಿ ವಾಣಿಜ್ಯ ತೆರಿಗೆಗಳ ಆಯುಕ್ತರು (ಕರ್ನಾಟಕ), ಬೆಂಗಳೂರು ಇವರ ನಡವಳಿಗಳು**

ವಿಷಯ: 2003ರ ಕರ್ನಾಟಕ ಮೌಲ್ಯವರ್ಧಿತ ತೆರಿಗೆ ಅಧಿನಿಯಮದಡಿ 'ಬಯೋ ಗ್ಯಾಸ್ ಪ್ಲಾಂಟ್‌ಗಳ' ಮೇಲೆ ಅನ್ವಯವಾಗುವ ತೆರಿಗೆ ದರದ ಸ್ಪಷ್ಟೀಕರಣ ಕುರಿತು.

ಉಲ್ಲೇಖ: ಮೆ: ಮೇಲ್‌ಹೆಮ್ ಇಂಜಿನಿಯರ್ಸ್ ಪ್ರೈ.ಲಿ. ಬೆಂಗಳೂರು-560097. ಇವರ ದಿ.19.05.2014ರ ಅರ್ಜಿ (ಟಿನ್: 29160611703)

***

2003ರ ಕರ್ನಾಟಕ ಮೌಲ್ಯವರ್ಧಿತ ತೆರಿಗೆ ಅಧಿನಿಯಮದಡಿಯಲ್ಲಿ ನೋಂದಣಿದಾರರಾದ ಮೆ: ಮೇಲ್‌ಹೆಮ್ ಇಂಜಿನಿಯರ್ಸ್ ಪ್ರೈ.ಲಿ. ನಂ.60/3, **"ಸನ್‌ಟ್ಯೂನ್"**,4ನೇ ಮಹಡಿ, 3ನೇ ಹಂತ, ನಂಜಪ್ಪ ಬಡಾವಣೆ, ವಿದ್ಯಾರಣ್ಯಪುರ, ಬೆಂಗಳೂರು-560097 ಇವರು ಮೇಲ್ಕಂಡ ಅರ್ಜಿಯಲ್ಲಿ 'ಬಯೋ ಗ್ಯಾಸ್ ಪ್ಲಾಂಟ್‌ಗಳ' ಮೇಲೆ ಅನ್ವಯವಾಗುವ ತೆರಿಗೆ ದರದ ಸ್ಪಷ್ಟೀಕರಣವನ್ನು ಕೋರಿರುತ್ತಾರೆ.

2. 2003ರ ಕರ್ನಾಟಕ ಮೌಲ್ಯವರ್ಧಿತ ತೆರಿಗೆ ಅಧಿನಿಯಮದ ಪ್ರಕರಣ 59ರ ಉಪ ಪ್ರಕರಣ (4)ರ ಮೇರೆಗೆ ವಾಣಿಜ್ಯ ತೆರಿಗೆ ಆಯುಕ್ತರು (ಕರ್ನಾಟಕ),ಬೆಂಗಳೂರು ಇವರು ತೆರಿಗೆಯ ನಿರ್ಧರಣೆ ಹಾಗೂ ರಾಜಸ್ವದ ಸಂಗ್ರಹಣೆ ಕಾರ್ಯದಲ್ಲಿ ಏಕರೂಪತೆಯನ್ನು ತರುವ ಉದ್ದೇಶಕ್ಕಾಗಿ, ಸದರಿ ಅಧಿನಿಯಮದಡಿಯಲ್ಲಿ ತೆರಿಗೆಗೆ ಒಳಪಡುವ ಸರಕುಗಳ ಸಂಬಂಧದಲ್ಲಿ ಈ ಅಧಿನಿಯಮದ ಅಡಿಯಲ್ಲಿ ಸಂದಾಯ ಮಾಡತಕ್ಕ ತೆರಿಗೆ ದರವನ್ನು ಸ್ಪಷ್ಟಪಡಿಸುವುದು ಅವಶ್ಯವೆಂದು ಅಥವಾ ಯುಕ್ತವೆಂದು ಭಾವಿಸಿದರೆ ಹಾಗೆ ಮಾಡಲು ಅಧಿಕಾರ ಹೊಂದಿದ್ದಾರೆ.

ಅರ್ಜಿದಾರರು ಕೋರಿರುವ ಸ್ಪಷ್ಟೀಕರಣವು ಮೇಲೆ ನಮೂದಿಸಿದ ಉಪಬಂಧದ ವ್ಯಾಪ್ತಿಗೊಳಪಡುವುದರಿಂದ ತೆರಿಗೆ ದರದ ಬಗ್ಗೆ ಸ್ಪಷ್ಟಪಡಿಸುವುದು ಸದರಿ ಉಪಬಂಧದ ಉದ್ದೇಶ ಸಾಧನೆಗಾಗಿ ಅವಶ್ಯವೆಂದು ಮನವರಿಕೆಯಾಗಿದೆ.

3. ಈ ಹಿನ್ನೆಲೆಯಲ್ಲಿ ತೆರಿಗೆ ದರವನ್ನು ಈ ಕೆಳಕಂಡಂತೆ ಸ್ಪಷ್ಟಪಡಿಸಲಾಗಿದೆ.

**ಸ್ಪಷ್ಟೀಕರಣ ಆದೇಶ ಸಂಖ್ಯೆ.ಸಿಎಲ್‌ಆರ್/ಸಿಆರ್. 36/14-15, ದಿ. 18-07-2014**

ಬಯೋ ಗ್ಯಾಸ್ ಪ್ಲಾಂಟ್‌ಗಳ ಸಪ್ಲೈ, ಎರೆಕ್ಷನ್, ಇನ್ಸ್ಟಲೇಷನ್ ಮತ್ತು ಕಮೀಷನಿಂಗ್ ಮೇಲೆ ಅನ್ವಯಿಸುವ ತೆರಿಗೆ ದರಗಳು ಕೆಳಕಂಡಂತೆ ಇರುತ್ತವೆ ಎಂದು ಈ ಮೂಲಕ ಸ್ಪಷ್ಟೀಕರಿಸಲಾಗಿದೆ.

| ಕ್ರ.ಸಂ. | **ಉತ್ಪನ್ನದ ಹೆಸರು** | **ತೆರಿಗೆ ದರ** |
|---|---|---|
| 1 | ಬಯೋ ಗ್ಯಾಸ್ ಪ್ಲಾಂಟ್‌ಗಳ ಸಪ್ಲೈ, ಎರೆಕ್ಷನ್, ಇನ್ಸ್ಟಲೇಷನ್ ಮತ್ತು ಕಮೀಷನಿಂಗ್ | ದಿನಾಂಕ: 31.03.2006ರ ಅಧಿಸೂಚನೆ ಸಂಖ್ಯೆ: ಎಫ್‌ಡಿ 116 ಸಿಎಸ್‌ಎಲ್ 2006 (13) ರಂತೆ ಶೇಕಡ 4 ರಷ್ಟು ರಾಜಿ ತೆರಿಗೆ. |
| 2 | ಬಯೋ ಗ್ಯಾಸ್ ಪ್ಲಾಂಟ್‌ಗಳ ಸಪ್ಲೈ, ಎರೆಕ್ಷನ್, ಇನ್ಸ್ಟಲೇಷನ್ ಮತ್ತು ಕಮೀಷನಿಂಗ್ | ಅ) 2003ರ ಕರ್ನಾಟಕ ಮೌಲ್ಯವರ್ಧಿತ ತೆರಿಗೆ ಅಧಿನಿಯಮದ ಪ್ರಕರಣ 4(1)(ಸಿ)ರಂತೆ 6ನೇ ಅನುಸೂಚಿಯ ಕ್ರ.ಸಂ. 20ರಂತೆ ದಿನಾಂಕ: 01.04.2011 ರಿಂದ 31.07.2012ರವರೆಗೆ ಶೇಕಡ 5.<br>ಆ) ದಿನಾಂಕ: 01.08.2012 ರಿಂದ ಶೇಕಡಾ 5.5 |

(ಅಜಯ್ ಸೇಠ್)
ವಾಣಿಜ್ಯ ತೆರಿಗೆಗಳ ಆಯುಕ್ತರು,
(ಕರ್ನಾಟಕ),ಬೆಂಗಳೂರು.

**ವಾಣಿಜ್ಯ ತೆರಿಗೆಗಳ ಆಯುಕ್ತರು**
**ಕರ್ನಾಟಕ, ಬೆಂಗಳೂರು**